# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 700 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ. ಫಾರೂಖ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21-02-2024 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಾರ್ಕಳ ತಾಲ್ಲೂಕು ಸಾಣೂರುನಿಂದ ಮಂಗಳೂರಿನ ಬಿಕರ್ನಕಟ್ಟೆವರೆಗಿನ ರಾಷ್ಟ್ರೀಯ ಹೆದ್ದಾರಿ 169 ಅಗಲೀಕರಣಕ್ಕಾಗಿ ಭೂಸ್ವಾಧೀನತೆಗಾಗಿ ಕೇಂದ್ರ ಸರ್ಕಾರದಿಂದ ಮಂಜೂರಾದ ಒಟ್ಟು ಪರಿಹಾರ ಧನವೆಷ್ಟು; | ಕಾರ್ಕಳ ತಾಲ್ಲೂಕು ಸಾಣೂರುನಿಂದ ಮಂಗಳೂರಿನ ಬಿಕರ್ನಕಟ್ಟೆ ಮುಖಾಂತರ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ-169 ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯವ್ಯಾಪ್ತಿಗೆ ಒಳಪಡುತ್ತದೆ. ಸದರಿ ಭಾಗದ ಅಭಿವೃದ್ಧಿ ಕಾಮಗಾರಿಗೆ ಅಗತ್ಯವಿರುವ ಭೂಸ್ವಾಧೀನ ಪರಿಹಾರಕ್ಕಾಗಿ ರೂ.485.05 ಕೋಟಿಗಳ ಮೊತ್ತವನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ. |
| ಆ | ಇದರಲ್ಲಿ ಭೂಮಿ ಕಳೆದುಕೊಂಡ ಸಂತ್ರಸ್ಥರಿಗೆ ವಿತರಿಸಿದ ಒಟ್ಟು ಪರಿಹಾರ ಧನವೆಷ್ಟು ಪಾವತಿಸಲು ಬಾಕಿ ಇರುವ ಧನವೆಷ್ಟು; ಪಾವತಿಸಲು ಬಾಕಿ ಇರಲು ಕಾರಣವೇನು; | ಮೇಲೆ ತಿಳಿಸಿರುವಂತೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ರೂ.485.05 ಕೋಟಿಗಳ ಪೈಕಿ ರೂ.377.50 ಕೋಟಿಗಳ ಭೂ ಪರಿಹಾರ ಮೊತ್ತವನ್ನು ಈಗಾಗಲೇ ಭೂಮಿ ಕಳೆದುಕೊಂಡ ಸಂತ್ರಸ್ತರಿಗೆ ನೀಡಲಾಗಿದೆ.<br>ಸದರಿ ಕಾಮಗಾರಿಗೆ ನಿಗಧಿಪಡಿಸಲಾದ ಪರಿಹಾರದ ವಿರುದ್ಧ ಭೂಮಿ ಕಳೆದುಕೊಂಡ ಸಂತ್ರಸ್ತರು ಆರ್ಬಿಟ್ರೇಶನ್‌ನ ತರುವಾಯ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಹೆಚ್ಚುವರಿ ಪರಿಹಾರಕ್ಕಾಗಿ ರಿಟ್ ಪ್ರಕರಣಗಳನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು 3ಜಿ ಅವಾರ್ಡ್‌ಗೆ ತಡೆಯಾಜ್ಞೆ ನೀಡಿರುತ್ತದೆ. ಆದ್ದರಿಂದ, ಸದರಿ ಪ್ರಕರಣಗಳು ವಿಲೇವಾರಿಯಾಗುವುದು ತಡವಾಗಿರುತ್ತದೆ. ಕೆಲವು ಭೂ ಸಂತ್ರಸ್ತರು ಸಂಬಂಧಪಟ್ಟ ದಂಡಾಧಿಕಾರಿಗಳು / ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಆರ್ಬಿಟ್ರೇಷನ್ ಪ್ರಕರಣವನ್ನು ದಾಖಲಿಸಿರುವ ಕಾರಣ ಭೂ ಪರಿಹಾರವನ್ನು ನೀಡುವುದು ವಿಳಂಬವಾಗಿರುತ್ತದೆ. |
| ಇ | ಈ ಹೆದ್ದಾರಿಯ ಅಗಲೀಕರಣ ಸಂಬಂಧ ಎಷ್ಟು ಪ್ರಕರಣಗಳು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ದಾಖಲಾಗಿವೆ; ಇವುಗಳಲ್ಲಿ ಇತ್ಯರ್ಥವಾದ ಹಾಗೂ ಬಾಕಿ ಇರುವ ಪ್ರಕರಣಗಳೆಷ್ಟು; | ರಾಷ್ಟ್ರೀಯ ಹೆದ್ದಾರಿ-169 ಸಾಣೂರುನಿಂದ ಮಂಗಳೂರಿನ ಬಿಕರ್ನಕಟ್ಟೆ ಅಗಲೀಕರಣ ಕಾಮಗಾರಿಯ ಭೂ ಸ್ವಾಧೀನಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಪರಿಹಾರಕ್ಕಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ದಾಖಲಿಸಿರುವ ಆರ್ಬಿಟ್ರೇಷನ್ ಪ್ರಕರಣಗಳು ಈ ಕೆಳಕಂಡಂತಿವೆ.<br>1. ಒಟ್ಟು ಪ್ರಕರಣಗಳು : 351<br>2. ಇತ್ಯರ್ಥವಾದ ಪ್ರಕರಣಗಳು : 139<br>3. ಮಾನ್ಯ ಸಿವಿಲ್ ಕೋರ್ಟ್‌ನಲ್ಲಿ ದಾಖಲಾಗಿರುವ ಪ್ರಕರಣಗಳು : 29<br>4. ಬಾಕಿ : 183 |

| | | |
|---|---|---|
| ಈ | ಈ ಪ್ರಕರಣಗಳಲ್ಲಿ ಜಿಲ್ಲಾಧಿಕಾರಿಗಳ ನ್ಯಾಯಾಲಯದ ತೀರ್ಪಿನ ನಂತರ ಸಿವಿಲ್ ನ್ಯಾಯಾಲಯದಲ್ಲಿ ದಾಖಲಿಸಿದ ಪ್ರಕರಣಗಳೆಷ್ಟು? | ಜಿಲ್ಲಾಧಿಕಾರಿಗಳ ನ್ಯಾಯಾಲಯದ ತೀರ್ಪಿನ ವಿರುದ್ಧ ಹೆಚ್ಚುವರಿ ಪರಿಹಾರಕ್ಕಾಗಿ ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ 29 ಪ್ರಕರಣಗಳು ದಾಖಲಾಗಿರುತ್ತದೆ. |

ಕಡತ ಸಂಖ್ಯೆ: ಲೋಇ 54 ಸಿಎನ್‌ಹೆಚ್ 2024 (ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು